# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಕೆ. ಪ್ರತಾಪಸಿಂಹ ನಾಯಕ್ ಇವರು ನಿಯಮ–72 ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಪ್ರತಿಯೊಂದು ಆರ್ಥಿಕ ವರ್ಷದಲ್ಲಿ ಸಾಕಷ್ಟು ದೊಡ್ಡ ಮೊತ್ತದ ಆರ್ಥಿಕ ವ್ಯವಹಾರಗಳು ನಡೆಯುತ್ತಿರುತ್ತವೆ. ಪ್ರತಿ ಆರ್ಥಿಕ ವ್ಯವಹಾರದಲ್ಲಿ ಪಾರದರ್ಶಕತೆ ಹಾಗೂ ಉತ್ತರದಾಯಿತ್ವ ಬಹಳ ಮುಖ್ಯವಾಗಿರುತ್ತದೆ. ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಆರ್ಥಿಕ ಸಂಪನ್ಮೂಲಗಳ ಕ್ರೋಢೀಕರಣ ಮತ್ತು ಲಭ್ಯವಿರುವ ಅನುದಾನವನ್ನು ನಿಗಧಿತ ಅವಧಿಯೊಳಗೆ ಸಮರ್ಪಕವಾಗಿ ವಿನಿಯೋಗ ಮಾಡುವುದು ಬಹಳ ಮಹತ್ವದ್ದಾಗಿದ್ದು, ಇದಕ್ಕೆ ಪೂರಕವಾಗಿ ಪ್ರತಿ ಗ್ರಾಮ ಪಂಚಾಯಿತಿಯು ಒಬ್ಬ ಪೂರ್ಣಕಾಲಿಕ ಲೆಕ್ಕ ಸಹಾಯಕರನ್ನು ಹೊಂದುವುದು ಅತ್ಯಂತ ಅನಿವಾರ್ಯ ಮತ್ತು ಅವಶ್ಯವಾಗಿದೆ.

ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ತಲಾ ಒಂದು ಲೆಕ್ಕ ಸಹಾಯಕರ ಹುದ್ದೆಯನ್ನು ಮಂಜೂರು ಮಾಡಿ ನೇಮಕಾತಿ ಮಾಡದೇ ಇರುವುದರಿಂದ ಅಭಿವೃದ್ಧಿ ಕುಂಠಿತವಾಗಿರುವ ಗಂಭೀರ ಸಮಸ್ಯೆ ಕುರಿತು.

****

**ಉತ್ತರ:** ಪ್ರಸ್ತುತ ರಾಜ್ಯದಲ್ಲಿ 5954 ಗ್ರಾಮ ಪಂಚಾಯತಿಗಳಿದ್ದು, ಹೆಚ್ಚಿನ ಆರ್ಥಿಕ ಮತ್ತು ಆಡಳಿತಾತ್ಮಕ ಜವಾಬ್ದಾರಿಯುಳ್ಳ ಪ್ರತಿ ಗ್ರಾಮ ಪಂಚಾಯತಿಗೆ ಒಂದು ಹುದ್ದೆಯಂತೆ ಒಟ್ಟು 2579 ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳನ್ನು ಮಂಜೂರು ಮಾಡಲಾಗಿದ್ದು, ಸದರಿ ಹುದ್ದೆಗಳಿಗೆ ನೇಮಕಾತಿ ಮಾಡಿಕೊಂಡು ನೌಕರರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು (ಗ್ರೇಡ್–1 ಮತ್ತು ಗ್ರೇಡ್–2) ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರಿಗೆ ಕಾರ್ಯ ಹಂಚಿಕೆ ಮಾಡಿ ಆದೇಶ ಹೊರಡಿಸಲಾಗಿದೆ.

ಸದರಿ ಆದೇಶದಲ್ಲಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆ ಮಂಜೂರಾಗದಿರುವ / ಖಾಲಿ ಇರುವ ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–1 ಅಥವಾ ಗ್ರೇಡ್–2 ರವರು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಯ ಕರ್ತವ್ಯವನ್ನು ನಿರ್ವಹಿಸಲು ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್–1 ಅಥವಾ ಗ್ರೇಡ್–2 ಹುದ್ದೆ ಖಾಲಿ ಇದ್ದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಕರ್ತವ್ಯಗಳನ್ನು ನಿರ್ವಹಿಸಲು ತಿಳಿಸಲಾಗಿದೆ.

ಸಂಖ್ಯೆ:ಗ್ರಾಅಪ 138 ಗ್ರಾಪಂಅ 2023.

(ಪ್ರಿಯಾಂಕ್ ಖರ್ಗೆ).
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.